ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆಯಲ್ಲಿ ಸ್ಥಾನ ಮೀಸಲಾತಿ

616 - ಶ್ರೀ ಪಿ.ಜಿ.ಆರ್. ಸಿಂಧ್ಯಾ (ಕನಕಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇತ್ತೀಚೆಗೆ ನಡೆದ ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಚುನಾವಣೆಗಳಲ್ಲಿ ಆ ಸ್ಥಾನಗಳ ಮೀಸಲಾತಿಗಳ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿವೆಯೇ?

ಆ) ಬಂದಿದ್ದಲ್ಲಿ, ಸರ್ಕಾರ ಆ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು?

ಇ) ಕೆಲವು ಹಿತಾಸಕ್ತಿಗಳ ಅನುಕೂಲಕ್ಕಾಗಿ ಆ ಚುನಾವಣೆಗಳನ್ನು ಮುಂದೆ ಹಾಕಿರುವುದಕ್ಕೆ ಸರ್ಕಾರ ಸೂಚನೆ ಕೊಟ್ಟಿದೆಯೇ?

ಈ) ಕೊಟ್ಟಿದ್ದಲ್ಲಿ ಅವುಗಳಿಗೆ ಕಾರಣಗಳೇನು?

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಹೌದು.

ಆ) ಅಂತಹ ತಾಲ್ಲೂಕುಗಳಲ್ಲಿ ಗ್ರಾಮ ಪಂಚಾಯತ್‌ಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಮೀಸಲಾತಿಯನ್ನು ಸರ್ಕಾರದ ನಿಯಮಕ್ಕೆ (ಗೈಡ್‌ಲೈನ್ಸ್) ಅನುಗುಣವಾಗಿ ಮರು ಪರಿಶೀಲಿಸಿ ಚುನಾವಣೆ ನಡೆಸಬೇಕೆಂದು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಹಾರನಹಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ದಿನಾಂಕ 24-3-1994 ರ ಲಿಖಿತ ಮೂಲಕ ಉತ್ತರಿಸುವ 12ನೇ ಪಟ್ಟಿಯಲ್ಲಿರುವ 20 ಪ್ರಶ್ನೆಗಳ ಪೈಕಿ ಪ್ರಶ್ನೆಗಳ ಸಂಖ್ಯೆ: 435, 554ಎ ಮತ್ತು 553ಎ ಪ್ರಶ್ನೆಗಳನ್ನು ಹೊರತುಪಡಿಸಿ ಇನ್ನುಳಿದ 17 ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಎಪಿಎಂಸಿ ಮಾರ್ಕೆಟ್ ಯಾರ್ಡ್‌ನಲ್ಲಿ ಸೆಸ್ ಮುಖಾಂತರ ವಸೂಲು ಮಾಡಿದ ಹಣದಿಂದ ರಸ್ತೆಗಳ ದುರಸ್ತಿ.

630 - ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ): ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಎಪಿಎಂಸಿಯವರು ರೈತರ ಕಡೆಯಿಂದ ಸೆಸ್ ಮುಖಾಂತರ ವಸೂಲು ಮಾಡಿದ ಹಣದಲ್ಲಿ ಎಪಿಎಂಸಿ ಕಮಾಂಡ್ ಏರಿಯಾದಲ್ಲಿ ಬರುವ ರಸ್ತೆ ದುರಸ್ತಿ ಸಲುವಾಗಿ ಹಣ ಬಿಡುಗಡೆ ಮಾಡಲು ಲೋಕೋಪಯೋಗಿ ಇಲಾಖೆ ಅಧಿಕಾರಿಗಳ ಕಡೆಯಿಂದ ಹಣ ವಸೂಲು ಮಾಡಲಾಗುವುದೇ;

ಆ) ಹಾಗಿದ್ದಲ್ಲಿ, ಎಪಿಎಂಸಿ ಕಮಾಂಡ್ ಏರಿಯಾದಲ್ಲಿ ಬರುವ ರಸ್ತೆಗಳನ್ನು ದುರಸ್ತಿ ಮಾಡಲು ಹಣ ಬಿಡುಗಡೆಮಾಡಲಾಗುವುದೇ;